**ದಿನಾಂಕ: 03–09–2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 165 ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:–***

| | |
|---|---|
| 1. ಶ್ರೀ. ಯತೀಶ್. ಎ. ಜೆ | – ನೋಡೆಲ್ ಅಧಿಕಾರಿ ಮತ್ತು ಸ.ಕಾ.ನಿ.ಅ (ಬನಶಂಕರಿ) ಉಪವಿಭಾಗ |
| 2. ಶ್ರೀ. ಮೋಹಿತ್. ಆರ್ | – ಸಹಾಯಕ ಅಭಿಯಂತರರು (ವಾರ್ಡ್ 165 ಗಣೇಶ ಮಂದಿರ) (ಕಿಯೋನಿಕ್ಸ್) |
| 3. ಶ್ರೀ. ಪವನ್ | – ಕಿರಿಯ ಆರೋಗ್ಯ ಪರಿವೀಕ್ಷಕರು |

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 165 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯ 28ನೇ ಮುಖ್ಯರಸ್ತೆಯ ಚರಂಡಿಗಳಲ್ಲಿ ಡೆಬ್ರಿಸ್ ಇರುವುದರಿಂದ ಮಳೆನೀರು ಚರಂಡಿಯಲ್ಲಿ ತುಂಬಿ ರಸ್ತೆಯಲ್ಲಿ ನೀರು ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ದೂರು ನೀಡಿರುತ್ತಾರೆ. ಅದರಂತೆ ಸದರಿ ರಸ್ತೆಯ ಚರಂಡಿಯಲ್ಲಿ ಹೂಳುಗಳನ್ನು ತೆಗೆದು ಮಳೆ ನೀರು ಸರಾಗವಾಗಿ ಹರಿಯುವಂತೆ ಮಾಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ಬನಂಶಕರಿ 2ನೇ ಹಂತದ ದೇವಗಿರಿ ದೇವಸ್ಥಾನದ ಸುತ್ತಾಮುತ್ತಾ ಮಳೆಯಿಂದಾಗಿ ಮರಗಳ ರೆಂಬೆಕೊಂಬೆಗಳು ಬಿದ್ದಿರುತ್ತದೆ. ಸದರಿ ರೆಂಬೆಕೊಂಬೆಗಳನ್ನು ತೆರವುಗೊಳಿಸಿಕೊಡುವಂತೆ ಸಾರ್ವಜನಿಕರು ಕೋರಿದರು. ಅದರಂತೆ ತಕ್ಷಣ ಸದರಿ ಮರದ ರೆಂಬೆಕೊಂಬೆಗಳನ್ನು ತೆರವುಗೊಳಿಸಲಾಗಿರುತ್ತದೆ.

ಪಿಓಡಬ್ಲ್ಯೂ ಅನುದಾನದಲ್ಲಿ ತೆಗೆದುಕೊಂಡಿರುವ ರಸ್ತೆ ಕಾಮಗಾರಿಗಳು ಅಂದಾಜುಪಟ್ಟಿಯ ತಯಾರಿಕೆಯ ಹಂತದಲ್ಲಿದ್ದು, ಅನುಮೋದನೆಗೊಂಡ ನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಎಂದು ವಿವರಿಸಲಾಯಿತು.

ಪ್ರಸ್ತುತ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು ಇನ್ನು 7 ದಿನಗಳವರೆಗೆ ವಿಸ್ತಲಿಸಲಾಗಿರುತ್ತದೆ ಎಂದು ತಿಳಿಸಲಾಯಿತು. ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ ಮಾಡುವುದು ಹಾಗೂ 2023ನೇ ಸಾಲಿನ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು, ವಾರ್ಡ್ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ನಮೂನೆ–6, ತೆಗೆದುಹಾಕಲು ನಮೂನೆ–7 ಮತ್ತು ತಿದ್ದುಪಡಿಗೊಳಿಸಲು ನಮೂನೆ–8 ರಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸಾರ್ವಜನಿಕರಿಗೆ ಕಂದಾಯ ಇಲಾಖೆ ಅಧಿಕಾರಿಗಳು ವಿವರಿಸಿದರು.

ಪು.ತಿ.ನೋ

ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಾರ್ವಜನಿಕರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಯತೀಶ್. ಎ. ಜೆ, ನೋಡೆಲ್ ಅಧಿಕಾರಿ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ